ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೩೩

**ಪಟ್ಟಿ – ೦೯**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತೆಂಟನೆಯ ಅಧಿವೇಶನ**

**ಗುರುವಾರ, ದಿನಾಂಕ : ೨೫ನೇ ಜುಲೈ, 2019**

---

**ಸಮೂಹ – IV**

೧. ಮುಖ್ಯಮಂತ್ರಿಗಳು.

೨. ಸಾರಿಗೆ ಸಚಿವರು.

೩. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು.

೪. ಸಣ್ಣ ಕೈಗಾರಿಕೆ ಸಚಿವರು.

೫. ಗಣಿ ಮತ್ತು ಭೂವಿಜ್ಞಾನ ಸಚಿವರು.

೬. ಸಕ್ಕರೆ ಸಚಿವರು.

---

## ಹೊಸ ಗಣಿ ಪ್ರದೇಶಗಳ ಸಂಶೋಧನೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ  ಸಂಸ್ಥೆಗಳಿಂದ ಚುನಾಯಿತರಾದವರು):–**

೫೮೩ (೭೯೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಗಣಿ ಪ್ರದೇಶಗಳ ಹೊರತಾಗಿ ಹೊಸ ಗಣಿ ಪ್ರದೇಶಗಳ ಸಂಶೋಧನೆ ಹುಡುಕಾಟಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಪ್ರಸ್ತುತ ಸರ್ಕಾರದ ವತಿಯಿಂದ ನಡೆಯುತ್ತಿರುವ ಗಣಿ ಪ್ರದೇಶಗಳು ಯಾವುವು; (ಜಿಲ್ಲಾವಾರು, ಚಿನ್ನ, ಕಬ್ಬಿಣ, ಕಲ್ಲು ಹಾಗೂ ಇತರೆ ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು?

## ಕೆ.ಎಸ್.ಎಫ್.ಸಿ ಸಂಸ್ಥೆಯ ಯೋಜನೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ  ಸಂಸ್ಥೆಗಳಿಂದ ಚುನಾಯಿತರಾದವರು):–**

೫೮೪ (೭೮೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲಿರುವ ಸಣ್ಣ ಪ್ರಮಾಣದ ಉದ್ದಿಮೆಗಳು ಹಾಗೂ ಹಿಂದುಳಿದ ಪ್ರದೇಶಗಳ ಕೈಗಾರಿಕಾ ಅಭಿವೃದ್ಧಿಗಾಗಿ ಮತ್ತು ನೂತನ ಉದ್ದಿಮೆಗಳನ್ನು ಸ್ಥಾಪಿಸುವವರುಗಳಿಗೆ ಕೆ.ಎಸ್.ಎಫ್.ಸಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಯಾವುವು;

(ಆ) ಈ ಹಣಕಾಸು ಸಂಸ್ಥೆಯು ಕಳೆದ ಮೂರು ವರ್ಷಗಳಲ್ಲಿ ಎಷ್ಟು ವಿಧದ ಉದ್ದಿಮೆಗಳಿಗೆ ಆರ್ಥಿಕ ನೆರವು ನೀಡಿದೆ; (ಜಿಲ್ಲಾವಾರು ಸಂಖ್ಯಾ ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಮಹಿಳಾ ಉದ್ದಿಮೆದಾರರಿಗೆ ಯಾವ ಯಾವ ಯೋಜನಾ ಸೌಲಭ್ಯಗಳನ್ನು ಒದಗಿಸಿಕೊಡಲಾಗಿದೆ; (ವಿವರ ನೀಡುವುದು)

(ಈ) ೨೦೧೯–೨೦ರ ಆರ್ಥಿಕ ವರ್ಷದಲ್ಲಿ ಕೆ.ಎಸ್.ಎಫ್.ಸಿ. ಸಂಸ್ಥೆಯ ಹೊಸ ಯೋಜನೆಗಳು ಯಾವುವು ;

(ಉ) ಹಿಂದುಳಿದ ವರ್ಗಗಳ ಉದ್ದಿಮೆದಾರರಿಗೆ ಆರ್ಥಿಕ ನೆರವಿನ ವಿಶೇಷ ಪ್ರೋತ್ಸಾಹಕ ಯೋಜನೆಗಳನ್ನು ರೂಪಿಸಲಾಗಿದೆಯೇ; ಹಾಗಿದ್ದಲ್ಲಿ, ಆ ವಿವರಗಳನ್ನು ನೀಡುವುದು?

## ಮದ್ಯದಂಗಡಿಗಳಿಗೆ ಅನುಮತಿ ನೀಡಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೫೮೫ (೭೮೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಹೊಸದಾಗಿ ಅನುಮತಿ ನೀಡಿದ ಬಾರ್ ಮತ್ತು ರೆಸ್ಟೋರೆಂಟ್‌ಗಳೆಷ್ಟು; (ಮಾಹಿತಿ ನೀಡುವುದು)

(ಆ) ಈ ರೀತಿಯ ಪರವಾನಿಗೆ ನೀಡಲು ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತದೆ;

(ಇ) ಮಂಡ್ಯ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಎಷ್ಟು ಮದ್ಯದಂಗಡಿಗಳನ್ನು ತೆರೆಯಲು ಪರವಾನಿಗೆ ನೀಡಲಾಗಿದೆ; ಮತ್ತು ಎಷ್ಟು ಪರವಾನಿಗೆಗಳನ್ನು ಮಂಡ್ಯ ಜಿಲ್ಲೆಗೆ ವರ್ಗಾವಣೆ ಮಾಡಲಾಗಿದೆ; (ಅಂಗಡಿಗಳ ಹೆಸರು ಮತ್ತು ನಡೆಸುತ್ತಿರುವ ಮಾಲೀಕರ ಹೆಸರಿನೊಂದಿಗೆ ಮಾಹಿತಿ ನೀಡುವುದು)

(ಈ) ಮಂಡ್ಯ ಜಿಲ್ಲೆಯಲ್ಲಿ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ಇರುವ ಅಂಗಡಿಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಎಷ್ಟು ಅಂಗಡಿಗಳನ್ನು ಸ್ಥಳಾಂತರಿಸಲಾಗಿರುತ್ತದೆ? (ಸಂಪೂರ್ಣ ಮಾಹಿತಿ ನೀಡುವುದು)

## ಮರಳು ಸಮಸ್ಯೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೫೮೬ (೭೯೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಮರ್ಪಕವಾಗಿ ಮರಳು ದೊರೆಯದಿರುವುದರಿಂದ ಸರ್ಕಾರದ ವಿವಿಧ ಕಾಮಗಾರಿಗಳು ಹಾಗೂ ವಸತಿ ಗೃಹಗಳ ನಿರ್ಮಾಣ ಕಾಮಗಾರಿಗಳು ಸ್ಥಗಿತಗೊಂಡು ಜನ ಸಾಮಾನ್ಯರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಸಮರ್ಪಕವಾಗಿ ಮರಳು ದೊರೆಯದಿರುವುದರಿಂದ ಮರಳು ವಿತರಣೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

# ಅಬಕಾರಿ ಇಲಾಖೆಯಲ್ಲಿ ಅನಧಿಕೃತವಾಗಿ ಗೈರು ಹಾಜರಾಗಿರುವ ಬಗ್ಗೆ

**ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ):-**

೫೮೭ (೭೮೧) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೭ರಲ್ಲಿ ಕೋಲಾರದ ಅಬಕಾರಿ ಇಲಾಖೆಯ ಉಪ ಅಧೀಕ್ಷಕರಿಗೆ ಸಂಬಂಧಪಟ್ಟ ಉಪ ಆಯುಕ್ತರು ನ್ಯಾಯಾಲಯದಲ್ಲಿ ಅನುಕೂಲಕರವಾಗಿ ಆದೇಶ ಪಡೆಯಲು ಅವಕಾಶ ಮಾಡಿಕೊಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಬಗ್ಗೆ ಕಾನೂನು ಪದಕೋಶದವರತು ವಿಚಾರಣೆಯನ್ನು ನಡೆಸುವ ಕುರಿತು ನೀಡಿರುವ ಕೆಲವು ಅಭಿಪ್ರಾಯವನ್ನು ಸಹ ಪಾಲನೆ ಮಾಡುವ ಬಗ್ಗೆ ಹಾಗೂ ನ್ಯಾಯಾಲಯದ ಆದೇಶ ವಿರುದ್ಧ ಮೇಲ್ಮನವಿ ಸಲ್ಲಿಸಲು ಆರ್ಥಿಕ ಇಲಾಖೆಯವರು ಮೊದಲು ಅನುಮತಿ ನೀಡಿ ತದನಂತರ, ಸರ್ಕಾರದ ಗಮನಕ್ಕೂ ತಾರದೆ ತರಾತುರಿಯಲ್ಲಿ ಅನುಮತಿ ಹಿಂಪಡೆದಿದ್ದರೆ ಕುರಿತು ಸರ್ಕಾರ ಕೈಗೊಂಡಿರುವ ಕ್ರಮವೇನು;

(ಇ) ಈ ರೀತಿ ಮೂರು ತಿಂಗಳಿಗೂ ಹೆಚ್ಚು ಅನಧಿಕೃತ ಗೈರು ಹಾಜರಾಗಿರುವ ಹಾಗೂ ಇದಕ್ಕೆ ಸಹಕಾರ ನೀಡಿ ಸರ್ಕಾರದ ಬೊಕ್ಕಸಕ್ಕೆ ನಷ್ಟವನ್ನುಂಟು ಮಾಡಿರುವವರ ಮೇಲೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

## ರಾಯಚೂರು ನಗರದಲ್ಲಿರುವ ಬಸ್ ನಿಲ್ದಾಣ ಹಾಗೂ ನೆರವಾರ ತಾಲ್ಲೂಕು ಬಸ್ ನಿಲ್ದಾಣಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೫೮೮ (೭೭೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರಿನಲ್ಲಿರುವ ಪ್ರಸ್ತುತ ಬಸ್ ನಿಲ್ದಾಣವನ್ನು ನಗರದ ಹೊರ–ಭಾಗಕ್ಕೆ ಸ್ಥಳಾಂತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ನೂತನ ತಾಲ್ಲೂಕು ಕೇಂದ್ರ ನೆರವಾರ ಪಟ್ಟಣದಲ್ಲಿ ಹೊಸ ಬಸ್ ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಲಿಂಗಸುಗೂರು ಪಟ್ಟಣದಲ್ಲಿ ನೂತನ ಬಸ್ ನಿಲ್ದಾಣ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;ಕಾಮಗಾರಿ ಪೂರ್ಣಗೊಳ್ಳುವುದು ಯಾವಾಗ ;

(ಈ) ರಾಯಚೂರು ಜಿಲ್ಲೆ, ಲಿಂಗಸುಗೂರು ಪಟ್ಟಣದಲ್ಲಿ ಪ್ರಾದೇಶಿಕ ಸಾರಿಗೆ ಕಛೇರಿ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಉ) ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಮುದಗಲ್ಲ ಪಟ್ಟಣದಲ್ಲಿ ಬಸ್ ಡಿಪೋ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಪ್ರತಿ ದಿನ ಮುದಗಲ್ಲ ಪಟ್ಟಣಕ್ಕೆ ವಿವಿಧ ಡಿಪೋಗಳಿಂದ ಸಂಚರಿಸುತ್ತಿರುವ ಬಸ್‌ಗಳ ಸಂಖ್ಯೆ ಹಾಗೂ ಮಾರ್ಗಗಳಾವುವು?

## ಗುಪ್ತದಳವನ್ನು ಬಲಿಷ್ಠಗೊಳಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೫೮೯ (೭೭೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗುಪ್ತದಳವನ್ನು ಬಲಿಷ್ಠಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಜ್ಯದಲ್ಲಿ ವಿವಿಧ ಸಂದರ್ಭಗಳಲ್ಲಿ ನಡೆಯಲಿರುವ ಘಟನೆಗಳ ಬಗ್ಗೆ ಗುಪ್ತದಳ ಸರಿಯಾಗಿ ಮಾಹಿತಿ ಪಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಯಚೂರು ಜಿಲ್ಲೆಯಲ್ಲಿ ನಿರ್ಮಾಣಗೊಂಡಿರುವ ಕೆ.ಐ.ಎ.ಡಿ.ಬಿ. ವಸತಿ ಗೃಹಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೫೯೦ (೭೭೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ಜಿಲ್ಲೆಯಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ಲ್ಯಾಂಡ್ ಬ್ಯಾಂಕ್ ಶೇಕರಣೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಯಚೂರು ಜಿಲ್ಲೆಯ ಯರಮರಸ್ ಹತ್ತಿರ ಕೆ.ಐ.ಎ.ಡಿ.ಬಿ. ವತಿಯಿಂದ ನಿರ್ಮಿಸಿರುವ ವಸತಿ ಗೃಹಗಳು ಎಷ್ಟು; ಸದರಿ ನಿರ್ಮಾಣಗೊಂಡಿರುವ ವಸತಿ ಗೃಹಕ್ಕೆ ಖರ್ಚಾಗಿರುವ ಮೊತ್ತ ಎಷ್ಟು; ಈ ವಸತಿ ಗೃಹಗಳನ್ನು ಹಂಚಿಕೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಯಚೂರು ನಗರದಲ್ಲಿರುವ ಕೆ.ಪಿ.ಟಿ.ಸಿ.ಎಲ್. ನ ೬೦ ಎಕರೆ ಕ್ಯಾಂಪಸ್‌ನ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೫೯೧ (೭೭೬) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರದಲ್ಲಿರುವ ಕೆ.ಪಿ.ಟಿ.ಸಿ.ಎಲ್. ವಿಭಾಗಕ್ಕೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ನಗರದಲ್ಲಿರುವ ಕೆ.ಪಿ.ಟಿ.ಸಿ.ಎಲ್. ಕ್ಯಾಂಪಸ್‌ನಲ್ಲಿರುವ ವಸತಿಗೃಹಗಳು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕೆ.ಪಿ.ಟಿ.ಸಿ.ಎಲ್. ನ ೬೦ ಎಕರೆ ಕ್ಯಾಂಪಸ್‌ನಲ್ಲಿ ವಿಭಾಗ ಕಛೇರಿಯ ಕಟ್ಟಡ ಹಾಗೂ ಕೆ.ಪಿ.ಟಿ.ಸಿ.ಎಲ್. ಹಾಗೂ ಜೆಸ್ಕಾಂ ಸಿಬ್ಬಂದಿಗಳಿಗೆ ವಸತಿ ಸೌಕರ್ಯ ಕಲ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

# ಶಾಲಾ ಕಾಲೇಜುಗಳ ಮತ್ತು ದೇವಸ್ಥಾನಗಳ ಸಮೀಪ ಬಾರ್ ಮತ್ತು ವೈನ್ ಶಾಪ್ ಇರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೯೨ (೭೫೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದ ನೀತಿ ನಿಯಮಗಳ ಪ್ರಕಾರ ಶಾಲೆಯಿಂದ ಕನಿಷ್ಠ ಎಷ್ಟು ಅಂತರದಲ್ಲಿ ಬಾರ್ ರೆಸ್ಟೋರೆಂಟ್, ವೈನ್ ಶಾಪ್‌ಗಳನ್ನು ಸ್ಥಾಪಿಸಬಹುದಾಗಿದೆ ;

(ಆ) ಈ ನಿಯಮಗಳನ್ವಯ ದೇವಸ್ಥಾನ, ಪ್ರಾರ್ಥನಾ ಮಂದಿರ ಮತ್ತು ಮಧ್ಯದ ಅಂಗಡಿಗಳ ನಡುವೆ ಇರಬೇಕಾದ ಅಂತರ ಎಷ್ಟು ;

(ಇ) ಹಲವಾರು ಸ್ಥಳಗಳಲ್ಲಿ ಶಾಲೆ ಕಾಲೇಜುಗಳ ೧೦೦–೨೦೦ ಅಡಿ ಅಂತರದಲ್ಲಿ ಮಧ್ಯದಂಗಡಿಗಳು ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ರಾಜ್ಯದಲ್ಲಿ ಕಾನೂನು ಉಲ್ಲಂಘನೆಯಾದ ಎಷ್ಟು ಪ್ರಕರಣಗಳು ದಾಖಲಾಗಿವೆ ; ಮತ್ತು ಅದರ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಉ) ಈ ತರಹದ ನಿಯಮ ಉಲ್ಲಂಘನೆಯಾದರು ಯಾವುದೇ ಕ್ರಮ ಕೈಗೊಳ್ಳದಿರುವ ಅಧಿಕಾರಗಳ ಮೇಲೆ ಸರ್ಕಾರ ಏನು ಕ್ರಮ ಜರುಗಿಸಿದೆ ? (ವಿವರ ನೀಡುವುದು)

## ಸಾರಿಗೆ ಇಲಾಖೆಯಲ್ಲಿ ಒಂದೇ ಅನುಮತಿ ಪತ್ರ ಪಡೆದು ಹಲವಾರು ವಾಹನಗಳನ್ನು ಓಡಿಸುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೯೩ (೭೫೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಾದೇಶಿಕ ಸಾರಿಗೆ ಕಛೇರಿ (ಆರ್.ಟಿ.ಒ) ಯಿಂದ ವಾಹನಗಳಿಗೆ ಪರವಾನಿಗೆ ಪಡೆದು, ಒಂದೇ ಅನುಮತಿ (Permit) ಪತ್ರದ ಆಧಾರದ ಮೇಲೆ ಹಲವಾರು ವಾಹನಗಳನ್ನು ಓಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿಯ ನಿಯಮ ಉಲ್ಲಂಘನೆಯಾದ ಪ್ರಕರಣಗಳೆಷ್ಟು; (ಕಳೆದ ವರ್ಷಗಳ ಮಾಹಿತಿ ಒದಗಿಸುವುದು)

(ಇ) ಕಾನೂನು ಉಲ್ಲಂಘನೆಯ ಪ್ರಕರಣಗಳಲ್ಲಿ ಇತ್ಯಾರ್ಥವಾದ ಪ್ರಕರಣಗಳೆಷ್ಟು ; ಬಾಕಿ ಉಳಿದಿರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಈ ತರಹದ ಕಾನೂನು ಉಲ್ಲಂಘನೆಯ ಪ್ರಕರಣಗಳ ಮೇಲೆ ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ?

## ರಾಜ್ಯದಲ್ಲಿ ಟೆಕ್ಸ್‌ಟೈಲ್ ಪಾರ್ಕ್ ಸ್ಥಾಪನೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೯೪ (೭೫೭ ) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ಆಯವ್ಯಯದಲ್ಲಿ ಹಲವಾರು ಬಾರಿ ಟೆಕ್ಸ್‌ಟೈಲ್ ಪಾರ್ಕ್ (Textile Park) ಸ್ಥಾಪಿಸುವ ಬಗ್ಗೆ ಪ್ರಸ್ತಾಪಿಸಿ ಅವುಗಳನ್ನು ಅನುಷ್ಠಾನಕ್ಕೆ ತರದಿರುವುದು ನಿಜವೇ ;

(ಆ) ರಾಜ್ಯದಲ್ಲಿ ಒಟ್ಟು ಎಷ್ಟು ಟೆಕ್ಸ್‌ಟೈಲ್ ಪಾರ್ಕ್‌ಗಳನ್ನು (Textile Park) ಪ್ರಾರಂಭಿಸಲಾಗಿದೆ ; (ಸ್ಥಳಗಳೊಂದಿಗೆ ವಿವರವನ್ನು ನೀಡುವುದು)

(ಇ) ಈ ಟೆಕ್ಸ್‌ಟೈಲ್ ಪಾರ್ಕ್ (Textile Park) ಸ್ಥಾಪನೆಯಿಂದ ಟೆಕ್ಸ್‌ಟೈಲ್ ಪಾರ್ಕ್ ಉದ್ಯಮದಲ್ಲಿ ಎಷ್ಟರ ಮಟ್ಟಿಗೆ ಅಭಿವೃದ್ಧಿಯಾಗಿದೆ ; (ಉತ್ಪಾದನೆವಾರು ವಿವರ ನೀಡುವುದು)

(ಈ) ರಾಜ್ಯದ ಉತ್ತರ ಕರ್ನಾಟಕ ಭಾಗದಲ್ಲಿ ಅತಿ ಹೆಚ್ಚು ಹತ್ತಿಯನ್ನು ಉತ್ಪಾದಿಸಲಾಗುತ್ತಿದ್ದು ಆ ಭಾಗದ ರೈತರಿಗೆ ಮತ್ತು ಜವಳಿ ಉದ್ಯಮದವರಿಗೆ ಅನುಕೂಲವಾಗುವ ಹಿನ್ನೆಲೆಯಲ್ಲಿ ಯಾವ ಬದಲಾವಣೆಗಳನ್ನು ತರಲಾಗಿದೆ ;

(ಉ) ಕರ್ನಾಟಕ ಕೈಗಾರಿಕ ಅಭಿವೃದ್ಧಿ ನಿಗಮದ (KIIDC) ಕೇಂದ್ರ ಸ್ಥಾನವನ್ನು ಉತ್ತರ ಕರ್ನಾಟಕದ ಹುಬ್ಬಳ್ಳಿಗೆ ಸ್ಥಳಾಂತರಿಸಿದ್ದರೂ ಈ ನಿಗಮದ ಮುಖ್ಯ ಕಾರ್ಯ ಕ್ಷೇತ್ರವು ಬೆಂಗಳೂರಿನಲ್ಲಿಯೇ ನಡೆಯುತ್ತಿದ್ದು, ಇದರ ಸ್ಥಳಾಂತರದ ಬಗ್ಗೆ ಸರ್ಕಾರದ ಸ್ಪಷ್ಟನಿಲುವೇನು ? (ವಿವರ ನೀಡುವುದು)

## ಕಬ್ಬು ಬೆಳೆಗಾರರಿಗೆ ಹನಿ ನೀರಾವರಿ ಅಳವಡಿಸಿಕೊಡುವ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೯೫ (೭೫೯) ಮಾನ್ಯ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಹನಿ ನೀರಾವರಿ ಯೋಜನೆಯನ್ನು ಕಲ್ಪಿಸಿ ಕೊಡಲು ಸರ್ಕಾರ ನಿರ್ಧರಿಸಿದೆ ; ಇದರ ಕ್ರಿಯಾ ಯೋಜನೆಯನ್ನು ತಯಾರಿಸಲಾಗಿದೆ ; ಇದ್ದಲ್ಲಿ ಅಂದಾಜು ಮೊತ್ತ ಎಷ್ಟು ;

(ಆ) ರೈತರು ತಮ್ಮ ಜಮೀನುಗಳಲ್ಲಿ ಹನಿ ನೀರಾವರಿ ಸೌಲಭ್ಯ ಕಲ್ಪಿಸಿಕೊಳ್ಳಲು ಇರುವ ಮಾನದಂಡಗಳೇನು ; ಇದರ ಬಗ್ಗೆ ರೈತರಿಗೆ ಸೂಕ್ತ ಮಾಹಿತಿ/ಮಾರ್ಗದರ್ಶನ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ೨೦೧೭-೧೮ ಹಾಗೂ ೨೦೧೮-೧೯ನೇ ಸಾಲಿಗೆ ಈ ಯೋಜನೆಯನ್ನು ಕಲ್ಪಿಸಲು ಕಾಯ್ದಿರಿಸಲಾಗಿದ್ದ ಅನುದಾನ ಎಷ್ಟು; ಬಳಕೆ ಮಾಡಿದ ಅನುದಾನವೆಷ್ಟು ;

(ಈ) ಯಾವ ಕಾಲಮಿತಿಯಲ್ಲಿ ಈ ಸೌಲಭ್ಯವನ್ನು ರೈತರಿಗೆ ಒದಗಿಸಲಾಗುವುದು ? (ವಿವರ ಒದಗಿಸುವುದು)

## ರಾಜ್ಯದ ಖಾಸಗಿ ಬಸ್ ಮಾಲೀಕರ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೯೬ (೬೩೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಖಾಸಗಿ ಬಸ್ ಮಾಲೀಕರುಗಳು ವಿಶೇಷ ಸಂದರ್ಭದಲ್ಲಿ (ಹಬ್ಬ–ಹರಿದಿನಗಳಲ್ಲಿ) ಪ್ರಯಾಣಿಕರಿಂದ ಪ್ರಯಾಣ ದರಕ್ಕಿಂತ ೩ ಪಟ್ಟು ದುಬಾರಿ ಹಣವನ್ನು ಪಡೆದು ಪ್ರಯಾಣಿಕರನ್ನು ಸುಲಿಗೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಖಾಸಗಿ ಬಸ್‌ಗಳಲ್ಲಿ ಪ್ರಯಾಣಿಕರ ಲಗೇಜ್‌ನ್ನು ಹೊರತು ಪಡಿಸಿ ಅಧಿಕ ಪ್ರಯಾಣದಲ್ಲಿ ಲಗೇಜ್‌ನ್ನು ಸಾಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಖಾಸಗಿ ಬಸ್‌ಗಳನ್ನು ನಿಯಂತ್ರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ಮಾಹಿತಿಯನ್ನು ನೀಡುವುದು)

## ರಾಜ್ಯದಲ್ಲಿನ ವಿದ್ಯುತ್ ಅವಶ್ಯಕತೆಯ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೯೭ (೬೩೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಂದು ದಿನಕ್ಕೆ ಎಷ್ಟು ಪ್ರಮಾಣದ ವಿದ್ಯುತ್ತಿನ ಅವಶ್ಯಕತೆಯಿದೆ ;

(ಆ) ರಾಜ್ಯದಲ್ಲಿ ಉತ್ಪಾದನೆಯಾಗುತ್ತಿರುವ ವಿದ್ಯುತ್ತಿನ ಪ್ರಮಾಣ ಎಷ್ಟು ; ಯಾವ ಯಾವ ಮೂಲಗಳಿಂದ ವಿದ್ಯುತ್ ಉತ್ಪಾದನೆಯಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕೊರತೆಯಾಗುವ ವಿದ್ಯುತ್ತಿನ ಪ್ರಮಾಣವೆಷ್ಟು ; ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ವಿದ್ಯುತ್ ಕೊರತೆಯನ್ನು ನೀಗಿಸಲು ಸರ್ಕಾರ ಪ್ರತಿ ವರ್ಷ ಭರಿಸುತ್ತಿರುವ ಹಣವೆಷ್ಟು ? (ಕಳೆದ ಮೂರು ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು)

## ಹೊಸ ಪಿಂಚಣಿ ಯೋಜನೆಯ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೯೮ (೬೩೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎನ್.ಪಿ.ಎಸ್. ಜಾರಿಯಾದಗಿನಿಂದ ಇಲ್ಲಿಯವರೆಗೆ ಸಂಗ್ರಹವಾದ ಎನ್.ಪಿ.ಎಸ್. ನೌಕರರ ಹಣ ಎಷ್ಟು ;

(ಆ) ಈ ರೀತಿಯಾಗಿ ಸಂಗ್ರಹವಾದಂತಹ ಹಣ ಯಾವ ಖಾತೆಯಲ್ಲಿ ಜಮೆಯಾಗಿರುತ್ತದೆ ;

(ಇ) ಈ ರೀತಿಯಾಗಿ ಸಂಗ್ರಹವಾದ ಹಣವನ್ನು ಯಾವ ಯಾವ ಷೇರು ಕಂಪನಿಗಳಲ್ಲಿ ವಿನಿಯೋಗಿಸಲಾಗಿದೆ ;

(ಈ) ನೌಕರರು ನಿವೃತ್ತಿಯಾದ ನಂತರದಲ್ಲಿ ಇದರಿಂದ ನಿವೃತ್ತಿ ವೇತನ ಯಾವ ಯಾವ ರೀತಿ ಸಂದಾಯವಾಗುತ್ತದೆ ?

## ಸರ್ಕಾರಿ ನೌಕರರ ನೇಮಕಾತಿ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೯೯ (೬೩೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ನೌಕರರ ನೇಮಕಾತಿ ಮತ್ತು ನಿಯಮಾವಳಿಗಳು ಎಷ್ಟು ವರ್ಷಗಳಿಗೊಮ್ಮೆ ಪರಿಷ್ಕರಣೆಯಾಗಬೇಕು ; (ಇಲಾಖಾವಾರು ಮಾಹಿತಿ ನೀಡುವುದು)

(ಆ) ನಿಯಮಾವಳಿಗಳನುಸಾರ ಪರಿಷ್ಕರಣೆಯಾಗದ ಇಲಾಖೆಗಳಾವುವು ;

(ಇ) ಸರ್ಕಾರವು ನೇಮಕಾತಿ ಮತ್ತು ನಿಯಮಾವಳಿಗಳನ್ನು ಕಾಲಕಾಲಕ್ಕೆ ಪರಿಷ್ಕರಣೆ ಮಾಡಲು ಕೈಗೊಂಡಿರುವ ಕ್ರಮಗಳೇನು ?

## ಅಕ್ರಮ ಸಾರಾಯಿ ಮಾರಾಟದ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೦೦ (೬೪೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಅನೇಕ ಜಿಲ್ಲೆಗಳ ಹಳ್ಳಿಗಳಲ್ಲಿ ಅಕ್ರಮ ಮಧ್ಯ (ಸಾರಾಯಿ) ಹಾಗೂ ಟೆಟ್ರಾ ಪ್ಯಾಕೇಟ್ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಅಕ್ರಮ ಮಧ್ಯ ಮಾರಾಟ ದಂಧೆಯಲ್ಲಿ ಪತ್ತೆಯಾಗಿರುವ ಪ್ರಕರಣಗಳೆಷ್ಟು ;

(ಇ) ಇಂತಹ ಪ್ರಕರಣಗಳಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಎನ್.ಪಿ.ಎಸ್. ಪದ್ಧತಿಯ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೦೧ (೭೯೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈ ಹಿಂದೆ ಸರ್ಕಾರವು ನೀಡಿದ್ದ ಭರವಸೆಯ ರೀತ್ಯಾ ಎನ್.ಪಿ.ಎಸ್. ರದ್ಧತಿಯ ಕುರಿತು ಚರ್ಚಿಸಲು ಸಮಿತಿಯನ್ನು ರಚಿಸಲಾಗಿದೆಯೇ ;

(ಆ) ಸಮಿತಿಯನ್ನು ರಚಿಸಿದ್ದಲ್ಲಿ, ಸಮಿತಿಯು ಯಾವ ಹಂತದಲ್ಲಿ ಕಾರ್ಯನಿರ್ವಹಿಸುತ್ತಿದೆ ;

(ಇ) ಎನ್.ಪಿ.ಎಸ್. ರದ್ಧತಿಯ ಬಗ್ಗೆ ಸಮಿತಿಯ ನಿಲುವೇನು ; ಈ ನಿಟ್ಟಿನಲ್ಲಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದೆಯೇ ? (ವಿವರ ನೀಡುವುದು)

## ಶಿವಮೊಗ್ಗ ಜಿಲ್ಲೆಯಲ್ಲಿ ಮರಳು ಗಣಿಗಾರಿಕೆ ಸಾಗಾಟದ ಕುರಿತು

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೦೨ (೬೨೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆಯ ಮರಳು ಗಣಿಗಾರಿಕೆ ಸಾಗಾಟದಲ್ಲಿ ಮರಳು ಮಾಫಿಯಾದ ಕೈವಾಡ ಹಾಗೂ ಗಣಿಗಾರಿಕೆಗೆ ಸಂಬಂಧಿಸಿದ ಅಧಿಕಾರಿ ಹಾಗೂ ಸಿಬ್ಬಂದಿ ನೇರವಾಗಿ ಶಾಮಿಲಾಗಿರುತ್ತಾರೆಂಬ

ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು) ಶಿವಮೊಗ್ಗ ಜಿಲ್ಲೆಯ ಭೂ ವಿಜ್ಞಾನಿ ಇಲ್ಲಿಂದ ವರ್ಗಾವಣೆಗೊಂಡಿದ್ದರು ಸಹ ಇಲ್ಲಿಯೇ ಮುಂದುವರೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವರನ್ನು ವರ್ಗಾವಣೆಯಾಗಿರುವ ಸ್ಥಳಕ್ಕೆ ನಿಯುಕ್ತಿಗೊಳಿಸಲು ಸರ್ಕಾರ ಏನು ಕ್ರಮ ಕೈಗೊಂಡಿರುತ್ತದೆ ;

(ಆ) ಶಿವಮೊಗ್ಗ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಯಾವ ಕ್ವಾರಿಗಳಿಗೆ ಅನುಮತಿ ನೀಡಿರುತ್ತದೆ ; ಎಷ್ಟು ಪ್ರಮಾಣದಲ್ಲಿ ಮರಳು ರಫ್ತು ಮಾಡಿರುತ್ತಾರೆ ; (ಸಂಬಂಧಿಸಿದವರಿಗೆ ಪಾಸು ವಿತರಣೆ ಮಾಡಿದ ವಿವರದ ಸವಿಸ್ತಾರ ವರದಿ ನೀಡುವುದು)

(ಇ) ಮರಳು ತೆಗೆಯಲು ಟೆಂಡರ್ ಪಡೆದಿರುವ ಗುತ್ತಿಗೆದಾರರು ಟೆಂಡರ್ ನಿಯಮವನ್ನು ಪಾಲಿಸದೆ ಇರುವುದು ಹಾಗೂ ಇದರಲ್ಲಿ ಇಲಾಖೆಯ ಅಧಿಕಾರಿಗಳು ಶಾಮೀಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಮರಳು ತೆಗೆಯಲು ಜಿಲ್ಲೆಯ ಯಾವ ಸ್ಥಳದಲ್ಲಿ ಅನುಮತಿ ನೀಡಲಾಗಿರುತ್ತದೆ ; ಪ್ರತಿ ಕ್ವಾರಿಯಿಂದ ಪ್ರತಿ ತಿಂಗಳು ಎಷ್ಟು ಪ್ರಮಾಣದಲ್ಲಿ ಪ್ರತಿ ದಿವಸ ಮರಳು ರಫ್ತಾಗಿರುತ್ತದೆ ; ಎಲ್ಲಿಗೆ ರಫ್ತಾಗಿರುತ್ತದೆ ; (ಪಾಸು ನಂ. ಸಮೇತ ಜಿಲ್ಲಾವಾರು/ ತಾಲ್ಲೂಕುವಾರು ಮಾರ್ಚ್ ೨೦೧೮ ರಿಂದ ಇಲ್ಲಿಯವರೆಗೆ ವಿವರ ನೀಡುವುದು)

(ಉ) ಸದರಿ ಮರಳು ಕ್ವಾರಿಗೆ ಅನುಮತಿಸಿರುವ ಸ್ಥಳದಿಂದ ನಿಯಮಬಾಹಿರವಾಗಿ ಮರಳು ರಫ್ತು ಮಾಡಿ ನಿಯಮ ಉಲ್ಲಂಘನೆ

ಮಾಡುವವರಿಗೆ ಮತ್ತೆ ಅದೇ ಸ್ಥಳದಲ್ಲಿ ಅಧಿಕಾರಿಗಳೊಂದಿಗೆ ಶಾಮೀಲಾಗಿ ಮರಳು ರಫ್ತಿಗೆ ಅವಕಾಶ ಕೊಟ್ಟಿರುವುದು ಕಾನೂನು ಬಾಹಿರ ಅಲ್ಲವೇ ? (ವಿವರ ನೀಡುವುದು)

## ಶಿವಮೊಗ್ಗ ಜಿಲ್ಲೆಯ ಭದ್ರಾವತಿ ತಾಲ್ಲೂಕಿನ ಮೈಸೂರು ಕಾಗದ ಕಾರ್ಖಾನೆಯ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೦೩ (೬೨೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆಯ ಭದ್ರಾವತಿ ತಾಲ್ಲೂಕಿನ ಮೈಸೂರು ಕಾಗದ ಕಾರ್ಖಾನೆಯನ್ನು ಮತ್ತೆ ಪ್ರಾರಂಭಿಸುವ ಬಗ್ಗೆ ಸರ್ಕಾರ ಯೋಚಿಸಿದೆಯೇ ಅಥವಾ ಈ ಕಾರ್ಖಾನೆಯನ್ನು ಪ್ರಾರಂಭ ಮಾಡದಿದ್ದಲ್ಲಿ ಖಾಸಗಿಯವರಿಗೆ ಗುತ್ತಿಗೆ ನೀಡುವ ಬಗ್ಗೆ ಅಥವಾ ಮಾರಾಟ ಮಾಡುವ ಬಗ್ಗೆ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಆ) ಈ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದ ಎಷ್ಟು ನೌಕರರು ವಿಆರ್‌ಎಸ್ ಪಡೆದಿದ್ದಾರೆ ; ವಿಆರ್‌ಎಸ್ ಪಡೆಯದೆ ಇರುವ ನೌಕರರ ಸಂಖ್ಯೆ ಎಷ್ಟು ; ಇವರುಗಳನ್ನು ಬೇರೆ ಇಲಾಖೆಗೆ ನಿಯೋಜನೆ ಮಾಡುವ ಉದ್ದೇಶವಿದೆಯೇ ;

(ಇ) ಉದ್ದೇಶವಿದ್ದಲ್ಲಿ, ಸದರಿ ಕಾರ್ಮಿಕರನ್ನು ಯಾವ ಕಾಲಮಿತಿಯೊಳಗೆ ನಿಯೋಜನೆ ಮೇಲೆ ಕಳುಹಿಸಲಾಗುವುದು ; ಈ ನಿಯೋಜನೆಯಿಂದ ತಾಂತ್ರಿಕವಾಗಿ ತೊಂದರೆಗಳೇನಾದರೂ ಉದ್ಭವಿಸುತ್ತಿದೆಯೇ ? (ಸಂಪೂರ್ಣ ವರದಿ ನೀಡುವುದು)

## ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ವಿವಿಧ ಹುದ್ದೆಗಳ ನೇಮಕಾತಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೬೦೪ (೬೨೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡುವ ಸಮಯದಲ್ಲಿ ಸರ್ಕಾರವು ಎಷ್ಟು ವರ್ಷಗಳ ಗರಿಷ್ಠ ವಯೋಮಿತಿಯನ್ನು ಸರ್ಕಾರ ನೇಮಕಾತಿಗಳಿಗೆ ನಿಗದಿಪಡಿಸಿದೆ ; ವಿವಿಧ ಹುದ್ದೆಗಳಿಗೆ ನಿಗದಿಪಡಿಸಿದ ಗರಿಷ್ಠ ವಯೋಮಿತಿಯ ಮಾಹಿತಿ ನೀಡುವುದು ;

(ಆ) ರಾಜ್ಯದಲ್ಲಿ ನಿರುದ್ಯೋಗಿಗಳ ಸಂಖ್ಯೆ ಏರುತ್ತಿರುವ ನಿಟ್ಟಿನಲ್ಲಿ ಸರ್ಕಾರಿ ನೇಮಕಾತಿಗಳಿಗೆ ಸಂಬಂಧಿಸಿದಂತೆ ಗರಿಷ್ಠ ವಯೋಮಿತಿಯ ಏರಿಕೆಯ ಪ್ರಸ್ತಾವ ಸರ್ಕಾರದ ಮುಂದಿದೆಯೇ ;

(ಇ) ಕರ್ನಾಟಕ ಲೋಕ ಸೇವಾ ಆಯೋಗ ನಡೆಸುವ ಮುಖ್ಯ ಪರೀಕ್ಷೆಗೆ ಸಂಬಂಧಿಸಿದಂತೆ ಎಷ್ಟು ವಿಷಯಗಳನ್ನು ಐಚ್ಛಿಕ ವಿಷಯಗಳನ್ನಾಗಿ ಆಯ್ಕೆ ಅಭ್ಯರ್ಥಿಗಳಿಗೆ ಅವಕಾಶ ನೀಡಲಾಗಿದೆ ;

(ಈ) ಕಳೆದ ೫ ವರ್ಷಗಳಲ್ಲಿ ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ಸರ್ಕಾರವು ಎಷ್ಟು ಹುದ್ದೆಗಳನ್ನು ಭರ್ತಿ ಮಾಡಿದೆ ? (ಇಲಾಖಾವಾರು ಹುದ್ದೆವಾರು ವಿವರ ನೀಡುವುದು)

## ಜಲ್ಲಿ ಕ್ರಷರ್‌ಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೬೦೫ (೬೨೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜಲ್ಲಿ ಕ್ರಷರ್‌ಗಳ ಮಾಲೀಕರಿಂದ ಸರ್ಕಾರಕ್ಕೆ ಬರಬೇಕಾಗಿರುವ ಬಾಕಿ ರಾಯಧನವೆಷ್ಟು ; ಈ ಬಾಕಿ ರಾಯಧನ ವಸೂಲು ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಮುಟ್ಟುಗೋಲು ಹಾಕಿದ ಜಲ್ಲಿಕಲ್ಲು ಮತ್ತು ಇತರ ಖನಿಜಗಳ ಮೊತ್ತವೆಷ್ಟು ; ಪ್ರಸ್ತುತ ಈ ಮುಟ್ಟುಗೋಲು ಹಾಕಿದ ಜಲ್ಲಿಕಲ್ಲುಗಳನ್ನು ಯಾವ ರೀತಿ ವಿಲೇ ಮಾಡಲಾಗಿದೆ ; ಇವುಗಳ ಮಾರಾಟದಿಂದ ಬಾಕಿ ಇರುವ ರಾಯಧನವನ್ನು ವಸೂಲು ಮಾಡಲು ಸರ್ಕಾರ ಯಾವ ಕ್ರಮಕೈಗೊಂಡಿದೆ ;

(ಇ) ಯಾವ ಕ್ರಷರ್‌ನಲ್ಲಿ ಎಷ್ಟು ಜಲ್ಲಿಕಲ್ಲುಗಳ ದಾಸ್ತಾನಿದೆ ; ಕ್ರಷರ್ ಘಟಕಗಳ ಸ್ಥಿತಿಗತಿ ಬಗ್ಗೆ ಡ್ರೋಣ್ ಸರ್ವೆ ನಡೆಸಲಾಗಿದೆಯೇ ; ಇಲ್ಲವಾದಲ್ಲಿ, ಯಾವಾಗ ನಡೆಸಲಾಗುವುದು ?

## ಜಂತಕಲ್ ಅಕ್ರಮ ಗಣಿಗಾರಿಕೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೬೦೬ (೬೪೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜಂತಕಲ್ ಅಕ್ರಮ ಗಣಿಗಾರಿಕೆ ಪ್ರಕರಣ ಕುರಿತು ವಿಶೇಷ ತನಿಖಾ ತಂಡದಿಂದ ಕ್ರಿಮಿನಲ್ ಪ್ರಕರಣ ದಾಖಲಾಗಿರುವ ಎಷ್ಟು

ಐ.ಎ.ಎಸ್. ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಈ ಪ್ರಕರಣದಲ್ಲಿ ಭಾಗಿಯಾಗಿರುವ ಐ.ಪಿ.ಎಸ್ ಅಧಿಕಾರಿಗಳ ಸಂಖ್ಯೆ ಎಷ್ಟು; ಇವರ ಮೇಲೆ ಕ್ರಿಮಿನಲ್ ಪ್ರಕರಣ ಯಾವ ದಿನಾಂಕದಂದು ದಾಖಲಾಗಿದೆ ;

(ಆ) ಐ.ಎ.ಎಸ್ ಮತ್ತು ಐ.ಪಿಎಸ್ ಅಧಿಕಾರಿಗಳ ಮೇಲೆ ದಾಖಲಾಗಿರುವ ಕ್ರಿಮಿನಲ್ ಪ್ರಕರಣದ ಕುರಿತು ತನಿಖೆ ನಡೆಸಲು ಯಾವಾಗ ಅನುಮತಿ ನೀಡಲಾಗಿದೆ ; ಅನುಮತಿ ನೀಡುವಂತೆ ಕೋರಿ ವಿಶೇಷ ತನಿಖಾ ತಂಡದಿಂದ ಸರಕಾರಕ್ಕೆ ಯಾವಾಗ ಮನವಿ ಸಲ್ಲಿಸಲಾಗಿದೆ ; ಇನ್ನೂ ನೀಡಿಲ್ಲವೆಂದಾದಲ್ಲಿ ಯಾವಾಗ ನೀಡಲಾಗುವುದು ;

(ಇ) ಜಂತಕಲ್ ಅಕ್ರಮ ಗಣಿಗಾರಿಕೆ ಪ್ರಕರಣದ ಅಕ್ರಮದಲ್ಲಿ ಭಾಗಿಯಾಗಿರುವ ಐ.ಎ.ಎಸ್ ಮತ್ತು ಐ.ಪಿ.ಎಸ್ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಜಂತಕಲ್ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಅಕ್ರಮವೆಸಗಲು ಐ.ಎ.ಎಸ್ ಅಧಿಕಾರಿಯ ಪುತ್ರನ ಬ್ಯಾಂಕ್ ಖಾತೆಗೆ ೨೦ ಲಕ್ಷ ಪಾವತಿಸಲಾಗಿದೆ ಎಂಬುದರ ಕುರಿತು ಸರ್ಕಾರದ ನಿಲುವೇನು ?

## ಕರ್ನಾಟಕ ಲೋಕಸೇವಾ ಆಯೋಗದಿಂದ ೧೯೯೮ನೇ ಬ್ಯಾಚಿನ 'ಎ' ಮತ್ತು 'ಬಿ' ವೃಂದ ಹುದ್ದೆಯ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೬೦೭ (೭೬೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಲೋಕಸೇವಾ ಆಯೋಗವು ೨೦೧೬ರ ಕರ್ನಾಟಕ ಉಚ್ಚನ್ಯಾಯಾಲಯದ ತೀರ್ಪನ್ನು ಆಧರಿಸಿ ಪ್ರಕಟಿಸಿರುವ ೧೯೯೮ನೇ ಬ್ಯಾಚಿನ, ಗ್ರೂಪ್ 'ಎ' ಮತ್ತು 'ಬಿ' ವೃಂದದ ಇತ್ತೀಚಿನ

ಪರಿಷ್ಕೃತ ಆಯ್ಕೆ ಪಟ್ಟಿಯ ಪ್ರಕಾರ ತಹಶೀಲ್ದಾರ್ ಹುದ್ದೆಗೆ ವರದಿ ಮಾಡಿಕೊಂಡ ಅಧಿಕಾರಿಗಳ ಹೆಸರು, ವರದಿ ದಿನಾಂಕ, ಪ್ರಸ್ತುತ ನಿರ್ವಹಿಸುತ್ತಿರುವ ಸ್ಥಳ ಮತ್ತು ಈ ಹಿಂದೆ ಸಲ್ಲಿಸಿದ ಸೇವಾ ವಿವರಗಳನ್ನು ನೀಡುವುದು ;

(ಆ) ಸದರಿ ಅಧಿಕಾರಿಗಳು ವಿವಿಧ ಇಲಾಖೆಗಳಲ್ಲಿ ಸಲ್ಲಿಸಿರುವ ಸೇವೆಯ ಹಿನ್ನಲೆಯಲ್ಲಿ ಹಾಗೂ ಅವರು ಪರಿವೀಕ್ಷಣಾರ್ಥಿ ಅವಧಿಯನ್ನು ಮುಕ್ತಾಯಗೊಳಿಸಿರುವ ಹಿನ್ನಲೆಯಲ್ಲಿ ಅವರುಗಳಿಗೆ ತಹಶೀಲ್ದಾರ್, ಸಹಾಯಕ ಆಯುಕ್ತರು ಹಾಗೂ ಅರ್ಹ ಹುದ್ದೆಗಳಿಗೆ ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಅವರುಗಳಿಗೆ ಪೂರ್ವಾನ್ವಯವಾಗಿ ಸೇವಾ ಜೇಷ್ಠತೆ ನೀಡುವ ಕುರಿತು ಸ್ವಾಭಾವಿಕ ನ್ಯಾಯಿತತ್ವಗಳು ಹಾಗೂ ಉಚ್ಚನ್ಯಾಯಾಲಯ ಮತ್ತು ಸರ್ವೋಚ್ಚನ್ಯಾಯಾಲಯದ ತೀರ್ಪುಗಳ ಹಿನ್ನಲೆಯಲ್ಲಿ ಕೈಗೊಂಡ ಕ್ರಮಗಳ ವಿವರಗಳೇನು ;

(ಈ) ಸೇವಾ ಮುಂಬಡ್ತಿ ನೀಡಿ ಹುದ್ದೆಗಳನ್ನು ನೀಡುವ ಬಗ್ಗೆ ಕೈಗೊಂಡ ಕ್ರಮಗಳೇನು ;

(ಉ) ಸದರಿ ಅಧಿಕಾರಿಗಳ ಸೇವಾ ಅವಧಿಯಲ್ಲಿ ಅವರಿಗೆ ಅನ್ಯಾಯವಾಗದಂತೆ ಅನ್ಯವಶ್ಯಕವಾಗಿ ತರಬೇತಿಯಲ್ಲಿ ತೊಡಗಿಸಿದಂತೆ ಸೇವಾ ಷರತ್ತುಗಳನ್ನು ಸಂರಕ್ಷಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಊ) ಸದರಿ ಅಧಿಕಾರಿಗಳ ಸೇವಾ ಷರತ್ತುಗಳನ್ನು ತಿರುವು–ಮುರುವುಗೊಳಿಸುವ ಉದ್ದೇಶದಿಂದ ಸರ್ಕಾರ ಸುಗ್ರೀವಾಜ್ಞೆಗಳನ್ನು ರೂಪಿಸಿದ್ದರೆ ಅದರ ಪ್ರತಿ ನೀಡುವುದು ? (ಘನತೆವೆತ್ತ ರಾಜ್ಯಪಾಲರ ತೀರ್ಪಿನ ಪ್ರತಿಯನ್ನು ನೀಡುವುದು)

## ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಸ್ಥಾಪನೆ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೦೮ (೭೮೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಸ್ಥಾಪನೆ ಯಾವಾಗ ಪ್ರಾರಂಭವಾಯಿತು ;

(ಆ) ಪ್ರಾರಂಭವಾದ ವರ್ಷದಿಂದ ಇಲ್ಲಿಯವರೆಗೆ ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಎಷ್ಟು ಹಣ ಒದಗಿಸಲಾಗಿದೆ ಮತ್ತು ಇಲ್ಲಿಯುವರೆಗೆ ಎಷ್ಟು ಹಣ ಬಿಡುಗಡೆಯಾಗಿದೆ ;

(ಇ) ರಾಯಚೂರು, ಕೊಪ್ಪಳ, ಯಾದಗಿರಿ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಬೆಂಗಳೂರು ನಗರದಲ್ಲಿ ಎಲೆಕ್ಟ್ರಿಕ್ ಬಸ್ ಚಲಾಯಿಸುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೬೦೯ (೭೬೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎಲೆಕ್ಟ್ರಿಕ್ ಬಸ್‌ಗಳನ್ನು ಚಲಾಯಿಸಲು ಕೇಂದ್ರ ಸರ್ಕಾರ ಸಬ್ಸಿಡಿ ನೀಡುವ ಯಾವುದಾದರೂ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; (ವಿವರವನ್ನು ನೀಡುವುದು)

(ಆ) ಈ ಹಿಂದೆ ಎಲೆಕ್ಟ್ರಿಕ್ ಬಸ್‌ಗಳಿಗೆ ಕೇಂದ್ರ ಸರ್ಕಾರ ನೀಡಿದ್ದ ಸಬ್ಸಿಡಿ ಹಣವನ್ನು ಉಪಯೋಗಿಸಿಕೊಳ್ಳಲು ಸರ್ಕಾರ ವಿಫಲವಾಗಿರುವುದು ನಿಜವೇ ;

(ಇ) ಎಲೆಕ್ಟ್ರಿಕ್ ಬಸ್‌ನಂತಹ ಪರಿಸರ ಸ್ನೇಹಿ ಸಾರಿಗೆಯನ್ನು ಅನುಷ್ಠಾನಗೊಳಿಸಲು ಹಾಗೂ ವಿದ್ಯುತ್ ಚಾಲಿತ ಬಸ್ ಸೇವೆ ಅಳವಡಿಸಿಕೊಳ್ಳಲು ಸರ್ಕಾರ ತೆಗೆದುಕೊಳ್ಳುತ್ತಿರುವ ಕ್ರಮಗಳೇನು ; (ವಿವರವನ್ನು ನೀಡುವುದು)

## ರಾಜ್ಯದಲ್ಲಿ ತೆರೆದ ವಿದ್ಯುತ್ ತಂತಿಗಳಿಂದ ಅವಘಡ ಸಂಭವಿಸಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೬೧೦ (೬೩೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೦೫ ವರ್ಷಗಳಲ್ಲಿ ರಾಜ್ಯದಲ್ಲಿ ತೆರೆದ ವಿದ್ಯುತ್ ತಂತಿಗಳಿಂದ ಹಾಗೂ ಇನ್ನೇತರ ವಿದ್ಯುತ್ ಅವಘಡಗಳಿಂದ ಮೃತಪಟ್ಟವರ ಸಂಖ್ಯೆ ಎಷ್ಟು ;

(ಆ) ಇಂತಹ ವಿದ್ಯುತ್ ಅವಘಡಗಳನ್ನು ತಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಕಳೆದ ೦೫ ವರ್ಷಗಳಲ್ಲಿ ವಿದ್ಯುತ್ ಅವಘಡದಲ್ಲಿ ಮೃತಪಟ್ಟವರ / ಗಾಯಗೊಂಡವರಿಗೆ ನೀಡಲಾಗಿರುವ ಪರಿಹಾರದ ವಿವರಗಳನ್ನು ಒದಗಿಸುವುದು ;

(ಈ) ರಾಜ್ಯ ಸರ್ಕಾರ ವಿದ್ಯುತ್ ತಂತಿಗಳನ್ನು ನೆಲದೊಳಗೆ ಅಳವಡಿಸುವ ಯೋಜನೆ ಹಮ್ಮಿಕೊಳ್ಳುತ್ತಿದೆಯೇ ? (ವಿವರವನ್ನು ಒದಗಿಸುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಸಣ್ಣ ಕೈಗಾರಿಕೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೧೧ (೭೮೫) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಸಣ್ಣ ಕೈಗಾರಿಕೆಗಳ ಶೆಡ್‌ಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಸಣ್ಣ ಕೈಗಾರಿಕೆ ಶೆಡ್‌ಗಳಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯ ಎಷ್ಟು; (ವಿವರ ನೀಡುವುದು)

(ಇ) ಸದರಿ ಜಿಲ್ಲೆಗಳಲ್ಲಿ ಖಾಲಿ ಇರುವ ಸಣ್ಣ ಕೈಗಾರಿಕೆಗಳ ಶೆಡ್‌ಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಈ) ೨೦೧೭–೧೮ನೇ ಸಾಲಿನಲ್ಲಿ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗಾಗಿ ಮತ್ತು ಸಣ್ಣ ಕೈಗಾರಿಕೆಗಳ ವಲಯಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಬಿಡುಗಡೆ ಮಾಡಿರುವ ಅನುದಾನವೆಷ್ಟು? (ವಿವರ ನೀಡುವುದು)

## ಹುಣಸೂರು ಬಸ್ ನಿಲ್ದಾಣದಲ್ಲಿ ಅವ್ಯವಸ್ಥೆ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೧೨ (೭೮೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೂತನವಾಗಿ ನಿರ್ಮಿಸಿರುವ ಹುಣಸೂರು ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದಲ್ಲಿ ವಿದ್ಯುತ್ ದೀಪಗಳಿಲ್ಲದೆ, ರಾತ್ರಿವೇಳೆ ಸಾರ್ವಜನಿಕರಿಗೆ ಪ್ರಯಾಣಿಕರಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಿಂದಾಗಿ ಹೊಸ ಬಸ್ ನಿಲ್ದಾಣದಲ್ಲಿ ರಾತ್ರಿವೇಳೆ ಕಳ್ಳಕಾಕರ ಹಾವಳಿ, ಅನೈತಿಕ ಚಟುವಟಿಕೆ ನಡೆಯುತ್ತಿದ್ದು, ಜನ ಸಾಮಾನ್ಯರಿಗೆ ಪ್ರಯಾಣಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ಒದಗಿಸುವುದು)

(ಇ) ಕೂಡಲೇ ಹುಣಸೂರಿನ ನೂತನ ಬಸ್ ನಿಲ್ದಾಣದ ಸುತ್ತಲೂ, ಪ್ರಖರ ವಿದ್ಯುತ್ ದೀಪಗಳ ವ್ಯವಸ್ಥೆ ಹಾಗೂ ಸೆಕ್ಯುರಿಟಿ ಗಾರ್ಡ್ ವ್ಯವಸ್ಥೆ ಮಾಡುವ ಮೂಲಕ ಸಾರ್ವಜನಿಕರಿಗೆ ಮತ್ತು ಪ್ರಯಾಣಿಕರಿಗೆ ಅನುಕೂಲ ಕಲ್ಪಿಸಲು ಕ್ರಮ ಜರುಗಿಸಲಾಗುವುದೇ ?

## ಆಧಾರ್ ಕಾರ್ಡ್ ಮಾಡಿಸಲು ಹಾಗೂ ತಿದ್ದುಪಡಿ ಮಾಡಲು ಆಗಿರುವ ತೊಂದರೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೧೩ (೭೮೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೊಸದಾಗಿ ಆಧಾರ್ ಕಾರ್ಡ್ ಮಾಡಿಸಲು ಹಾಗೂ ಆಧಾರ್ ಕಾರ್ಡ್ ತಿದ್ದುಪಡಿ ಮಾಡಿಸಲು, ಗ್ರಾಮಾಂತರ ಪ್ರದೇಶದ ಜನ ಸಾಮಾನ್ಯರು ಬವಣೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೇವಲ ಹೆಡ್ ಪೋಸ್ಟ್ ಆಫೀಸ್‌ಗಳು ಮತ್ತು ಆಯ್ದ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಮಾತ್ರ ಈ ಸೌಲಭ್ಯ ಇದ್ದು, ಪ್ರತಿನಿತ್ಯ ಹಳ್ಳಿಗಾಡಿನಿಂದ ಬರುವ ನೂರಾರು ಸಾರ್ವಜನಿಕರು ಗಂಟೆಗಟ್ಟಲೆ, ದಿನಗಟ್ಟಲೆ ಆಧಾರ್ ಕಾರ್ಡ್ ಪಡೆಯಲು ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಮೊದಲಿನಂತೆ ತಾಲ್ಲೂಕು ಕಚೇರಿಯ ನೆಮ್ಮದಿ ಕೇಂದ್ರಗಳು, ಪುರಸಭೆ ಮತ್ತು ಖಾಸಗಿ ಅನುಮತಿ ಪಡೆದ ಸಂಸ್ಥೆಗಳ ಮೂಲಕ ಈ ಆಧಾರ್ ಕಾರ್ಡ್ ಮಾಡಿಸಲು ಮತ್ತು ತಿದ್ದುಪಡಿ ಮಾಡಿಸಲು ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಸೂಕ್ತ ಸಲಹೆ ನೀಡಿ, ಈ ವ್ಯವಸ್ಥೆಯನ್ನು ಜಾರಿಗೆ ತರಲು ಕ್ರಮ ತೆಗೆದುಕೊಳ್ಳುವುದೇ ?

## ಖಾಸಗಿ ಸಾರಿಗೆ ಸಂಸ್ಥೆಗಳು ವಾರಾಂತ್ಯದಲ್ಲಿ ಹೆಚ್ಚಿನ ಬಸ್‌ದರವನ್ನು ವಿಧಿಸುತ್ತಿರುವ ಬಗ್ಗೆ

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):-**

೬೧೪ (೭೬೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಖಾಸಗಿ ಸಾರಿಗೆ ಸಂಸ್ಥೆಯವರು ವಾರಾಂತ್ಯದಲ್ಲಿ ಮತ್ತು ಹಬ್ಬದ ದಿನಗಳಲ್ಲಿ ನಿಗದಿತ ಪ್ರಯಾಣ ದರಕ್ಕಿಂತ ಅತ್ಯಂತ ಹೆಚ್ಚಿನ ಬಸ್‌ದರವನ್ನು ಪ್ರಯಾಣಿಕರ ಮೇಲೆ ವಿಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೆಚ್ಚಿನ ಬಸ್‌ದರವನ್ನು ಪ್ರಯಾಣಿಕರಿಂದ ವಸೂಲು ಮಾಡಲು ಕಾನೂನು ಅಥವಾ ನಿಯಮಗಳಲ್ಲಿ ಅವಕಾಶವೇನಾದರೂ ಇದೆಯೇ ; (ವಿವರ ನೀಡುವುದು)

(ಆ) ಇದ್ದಲ್ಲಿ, ನಿಯಮ ಬಾಹಿರವಾಗಿ ಬಸ್ ದರ ನಿಗದಿಪಡಿಸುತ್ತಿರುವ ಖಾಸಗಿ ಸಾರಿಗೆ ಸಂಸ್ಥೆಗಳ ಮೇಲೆ ಕಾನೂನು ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಇ) ಅ ವೈಜ್ಞಾನಿಕವಾಗಿ ಬಸ್ ಪ್ರಯಾಣ ದರ ವಿಧಿಸುತ್ತಿರುವುದನ್ನು ತಡೆಯಲು ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ವಿಜಯಪುರ ನಗರದಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡುವ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೬೧೫ (೭೬೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ನಗರದಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ; (ಈ ಯೋಜನೆಯ ವಿವರಗಳನ್ನು ನೀಡುವುದು)

(ಆ) ಸದರಿ ವಿಮಾನ ನಿಲ್ದಾಣ ನಿರ್ಮಾಣಕ್ಕಾಗಿ ವಿಜಯಪುರ ಜಿಲ್ಲೆಯಲ್ಲಿ ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆಯೇ ; ಎಷ್ಟು ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ; ಇದಕ್ಕಾಗಿ ತಗಲಿರುವ ವೆಚ್ಚ ಎಷ್ಟು ; ಯಾವ ವರ್ಷದಲ್ಲಿ ಭೂಸ್ವಾಧೀನಪಡಿಸಿಕೊಳ್ಳಲಾಗಿದೆ ;

(ಇ) ಯಾವ ಸಮಯದೊಳಗೆ ವಿಮಾಣ ನಿಲ್ದಾಣ ನಿರ್ಮಾಣಕ್ಕೆ ಸರ್ಕಾರ ಯೋಜನೆ ರೂಪಿಸಿದೆ ; ಈ ನಿಟ್ಟಿನಲ್ಲಿ ಏನು ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. ೦102/250 ಪ್ರತಿಗಳು/19–07–2019